## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015-16ನೇ ಸಾಲಿನ ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರದ ಆಡಳಿತಕ್ಕಾಗಿ ಆವರ್ತಕ ವೆಚ್ಚ ಹಾಗೂ ಬೋಧಕರುಗಳಿಗೆ ಸಹಾಯಾನುದಾನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಗೆ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:25-07-2013.
2. ಭಾರತ ಸರ್ಕಾರದ ಬಿಡುಗಡೆ ಆದೇಶ ಪತ್ರ ಸಂಖ್ಯೆ:ಕೆ-11011/48/2015-ಸಿಬಿ, ದಿನಾಂಕ:22-12-2015.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 213 ಜಿಪಸ 2015, ದಿನಾಂಕ:28-01-2016.
4. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ರಾಗ್ರಾಸಂ/ಆರ್.ಜಿ.ಪಿ.ಎಸ್.ಎ/05/2015-16, ದಿನಾಂಕ:27-09-2016.

ಪ್ರಸ್ತಾವನೆ:

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಎಂಬ ನೂತನ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

ಮೇಲೆ ಓದಲಾದ(1)ರ ಆದೇಶದಲ್ಲಿ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. 2015-16ನೇ ಸಾಲಿನ ಆಯವ್ಯಯದಲ್ಲಿ ರಾಜ್ಯ ಸರ್ಕಾರವು ಸದರಿ ಯೋಜನೆಯಡಿ ರೂ.3000.00 ಲಕ್ಷಗಳ ಅನುದಾನವನ್ನು ಒದಗಿಸಿರುತ್ತದೆ. ಮೇಲೆ ಓದಲಾದ(2)ರ ಆದೇಶದ ಮೂಲಕ 2015-16ನೇ ಸಾಲಿನ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ರೂ.32.71 ಕೋಟಿಗಳ ಅನುದಾನವನ್ನು ಕೇಂದ್ರ ಸರ್ಕಾರವು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಿರುತ್ತಾರೆ. ಸದರಿ ಅನುದಾನವನ್ನು ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿ ನಿರ್ವಹಿಸಲಾಗುತ್ತಿದೆ.

ರಾಜ್ಯದ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಆಡಳಿತಾತ್ಮಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ಚುನಾಯಿತ ಪ್ರತಿನಿಧಿಗಳು ಹಾಗೂ ಆಡಳಿತ ವರ್ಗದವರಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿಯನ್ನು ನೀಡುವ ಉದ್ದೇಶವನ್ನು ಈ ಯೋಜನೆಯಡಿ ಅಳವಡಿಸಿಕೊಳ್ಳಲಾಗಿದೆ. ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಕೈಗೊಳ್ಳುವುದು, ವಿವಿಧ ಇಲಾಖಾ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯ ಆಡಳಿತ ವರ್ಗದವರಿಗೆ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ ಪುನಶ್ಚೇತನ ತರಬೇತಿಗಳನ್ನು ಹಾಗೂ ಸ್ಯಾಟಲೈಟ್ ಕಾರ್ಯಕ್ರಮಗಳನ್ನು ರಾಜ್ಯ ಮಟ್ಟದಲ್ಲಿನ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರದ ಮೂಲಕ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಯು ಆಯೋಜಿಸುತ್ತಿದೆ. ಸದರಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಬೆಂಗಳೂರಿನ ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ (ಎಂ.ಜಿ.ಐ.ಆರ್.ಇ.ಡಿ.) ವ್ಯಾಪ್ತಿಯಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದ್ದು, ಈ ಕೇಂದ್ರದ ಆಡಳಿತವು ಸುಗಮವಾಗಿ ನಡೆಯಲು ಆವರ್ತಕ ವೆಚ್ಚಕ್ಕಾಗಿ ಹಾಗೂ ಬೋಧಕರುಗಳಿಗೆ ಸಹಾಯಾನುದಾನ (Recurring cost for Management of State Panchyath Resource Center including faculty support)ವನ್ನು ನೀಡಬೇಕಾಗಿದೆ. ಅದರಂತೆ, ಮೇಲೆ ಓದಲಾದ(4)ರ ಪತ್ರದಲ್ಲಿ ಕೋರಿರುವಂತೆ ರೂ.20,00,000/-ಗಳ ಅನುದಾನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಲು ಹಾಗೂ ಈ ವೆಚ್ಚವನ್ನು "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆ" ಖಾತೆಯಲ್ಲಿ ಪ್ರಸ್ತುತ ಲಭ್ಯವಿರುವ ಅನುದಾನದಲ್ಲಿ ಭರಿಸಲು ಉದ್ದೇಶಿಸಿದೆ. ಅದಕ್ಕಾಗಿ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 213 ಜಿಪಸ 2015, ಬೆಂಗಳೂರು, ದಿನಾಂಕ:28-11-2016.

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯಡಿ ಪಂಚಾಯತ್ ರಾಜ್ ಚುನಾಯಿತ

ಪ್ರತಿನಿಧಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಕೈಗೊಳ್ಳುವುದು, ವಿವಿಧ ಇಲಾಖಾ ಅಭಿವೃದ್ಧಿ ಅಧಿಕಾರಿಗಳಿಗೆ, ಪಂಚಾಯತ್ ರಾಜ್ ವ್ಯವಸ್ಥೆಯ ಆಡಳಿತ ವರ್ಗದವರಿಗೆ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ ಪುನಶ್ಚೇತನ ತರಬೇತಿಗಳನ್ನು ಹಾಗೂ ಸ್ಯಾಟಲೈಟ್ ಕಾರ್ಯಕ್ರಮಗಳನ್ನು ರಾಜ್ಯ ಮಟ್ಟದಲ್ಲಿನ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರದ ಮೂಲಕ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಯು ಆಯೋಜಿಸುತ್ತಿದೆ. ಈ ಕೇಂದ್ರದ ಆಡಳಿತವು ಸುಗಮವಾಗಿ ನಡೆಯಲು ಆವರ್ತಕ ವೆಚ್ಚಕ್ಕಾಗಿ ಹಾಗೂ ಬೋಧಕರುಗಳಿಗೆ ಸಹಾಯಾನುದಾನ(Recurring cost for Management of State Panchyath Resource Center including faculty support)ವನ್ನು ನೀಡುವ ಉದ್ದೇಶಕ್ಕಾಗಿ ರೂ.20,00,000/- (ಇಪ್ಪತ್ತು ಲಕ್ಷಗಳು ಮಾತ್ರ)ಗಳ ಅನುದಾನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರುರವರಿಗೆ ಬಿಡುಗಡೆಗೊಳಿಸಲು ಆದೇಶಿಸಿದೆ.

ಈ ಅನುದಾನವನ್ನು ರಾಜ್ಯ ಸರ್ಕಾರದ ವತಿಯಿಂದ ಬೆಂಗಳೂರಿನ ದೇನಾ ಬ್ಯಾಂಕ್, ಇಂದಿರಾನಗರದ ಶಾಖೆಯಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಯ ಹೆಸರಿನಲ್ಲಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರಿನ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಆರ್.ಜಿ.ಪಿ.ಎಸ್.ಎ ಯೋಜನೆಯ ಖಾತೆ ಸಂಖ್ಯೆ 64133839448 (IFSC Code SBMY0041010)ಗೆ ಆನ್‌ಲೈನ್ ಮೂಲಕ ವರ್ಗಾಯಿಸುವುದು.

<u>ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.</u>

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಸದರಿ ಅನುದಾನದ ನಿರ್ವಹಣೆಯನ್ನು ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಪ್ರತ್ಯೇಕ ಉಳಿತಾಯ ಖಾತೆಯನ್ನು ತೆರೆದು ಅದರಲ್ಲಿ ವ್ಯವಹರಿಸುವುದು ಹಾಗೂ ಸದರಿ ಅನುದಾನಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ನಗದು ಪುಸ್ತಕವನ್ನು ನಿರ್ವಹಿಸುವುದು.
3. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನಕ್ಕೆ ಎದುರಾಗಿ ನಮೂನೆ ಜಿ.ಎಫ್.ಆರ್ 19-ಎ(ಲಗತ್ತಿಸಿದೆ)ರಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಮೂಲಕ ನಿರ್ದೇಶಕರು(ಪಂ.ರಾಜ್-2) ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು. ಇದರ ಜೊತೆಗೆ Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
4. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ತರಬೇತಿ ಕಾರ್ಯಕ್ರಮಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಆಗಮಿಸುವರು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್.ಡಿ 03 ಟಿ.ಎಫ್.ಪಿ 2016 ದಿನಾಂಕ:02.04.2016ರಲ್ಲಿ ತಿಳಿಸಿದಂತೆ ಆಯಾ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತಗೊಳಿಸಲಾಗಿರುವ ಅಧಿಕಾರದನ್ವಯ ಬಿಡುಗಡೆಗೊಳಿಸಲು ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/11

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

28.11.16

ನಿರ್ದೇಶಕರು (ಪಂ.ರಾಜ್-2)
ಗ್ರಾ.ಅ. & ಪಂ.ರಾಜ್ ಇಲಾಖೆ

ಗೆ,

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.

4. ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
6. ನಿರ್ದೇಶಕರು(ಪ್ರ), ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ, ಎಂ.ಜಿ.ಐ.ಆರ್.ಇ.ಡಿ. ಆವರಣ, ಜಕ್ಕೂರು, ಬೆಂಗಳೂರು.
7. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.